# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 18.01.2022 ರಂದು ಬೆಳಿಗ್ಗೆ 11.30 ಗಂಟೆಗೆ ಶ್ರೀ ಬಿ.ಆರ್.ರವಿಕುಮಾರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್.ರವಿಕುಮಾರ್ | ನೋಡಲ್ ಅಧಿಕಾರಿ–ವಾರ್ಡ್ ನಂ.71 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 71 |
| 3 | ಶ್ರೀ ರಾಮಣ್ಣ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 4 | ಶ್ರೀ ಶ್ರೀನಿವಾಸ್ ವಿ | ಮೀಟರ್ ಮಾಪಕರು, ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 5 | ಶ್ರೀ ತಿಪ್ಪೇಸ್ವಾಮಿ ಕೆ ಓ | ಪಿ.ಹೆಚ್.ಸಿ ಹೆಗ್ಗನಹಳ್ಳಿ |
| 6 | ಕೆ ಶಿವಲಿಂಗೇಗೌಡ | ತೋಟಗಾರಿಕೆ ಇಲಾಖೆ |
| 7 | ಶ್ರೀ ವೆಂಕಟರಾಜು | ಸದಸ್ಯರು |
| 8 | ಹೆಚ್ ಟಿ ಮುನಿರಾಜು | ಕಂದಾಯ ವಸೂಲಿಗಾರರು |

:ನಡಾವಳಿಯ ವರದಿ:

➢ ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

**<u>ವಿಷಯ ಸಂಖ್ಯೆ: 1:–</u> ಹೆಗ್ಗನಹಳ್ಳಿ ವಾರ್ಡ್ ವ್ಯಾಪ್ತಿಯ ಸುಂಕದಕಟ್ಟೆ, ಉದ್ಯಾನವನದ ಬಳಿ ನಾಡಪ್ರಭು ಕೆಂಪೇಗೌಡರ ಪುತ್ಥಳಿ ಪ್ರತಿಷ್ಠಾಪನೆಗೆ ಅನುಮತಿ ಕೋರಿ ಬಂದಿರುವ ಮನವಿಯ ಬಗ್ಗೆ**

ವಾರ್ಡ್ ನಂ.71 ರ ಸಹಾಯಕ ಅಭಿಯಂತರರು ಮಾತನಾಡಿ, ಹೆಗ್ಗನಹಳ್ಳಿ ವ್ಯಾಪ್ತಿಯ ಸುಂಕದಕಟ್ಟೆ, ಉದ್ಯಾನವನದ ಬಳಿ ನಾಡಪ್ರಭು ಕೆಂಪೇಗೌಡರ ಪುತ್ಥಳಿ ಪ್ರತಿಷ್ಠಾಪನೆಗೆ ಅನುಮತಿ ಕೋರಿ ಆರ್.ರಂಗೇಶ್ ಗೌಡ, ರಾಜ್ಯಾಧ್ಯಕ್ಷರು, ಸುವರ್ಣ ಕರ್ನಾಟಕ ಯುವ ವೇದಿಕೆ (ನೋಂ.) ರವರು ಪತ್ರ ಸಲ್ಲಿಸಿರುವುದನ್ನು ಸಭೆಯಲ್ಲಿ ಪ್ರಸ್ತಾಪಿಸಿದರು.

ಈ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಲಾಗಿ ಸುಂಕದಕಟ್ಟೆ, ಉದ್ಯಾನವನದ ಬಳಿ ನಾಡಪ್ರಭು ಕೆಂಪೇಗೌಡರ ಪ್ರತಿಷ್ಠಾಪನೆಯಿಂದ ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆ ಇಲ್ಲವಾದ್ದರಿಂದ ಸಮುಚ್ಛಿತ ಮಾರ್ಗ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ & ಅನುಮತಿಯನ್ನು ಪಡೆದುಕೊಳ್ಳುವಂತೆ ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

<u>ವಿಷಯ ಸಂಖ್ಯೆ: 2:-</u> **ಕೋವಿಡ್ ಬಗ್ಗೆ**

ಸಭೆಯಲ್ಲಿ ಹಾಜರಿದ್ದ ಶ್ರೀ ತಿಪ್ಪೇಸ್ವಾಮಿ.ಕೆ.ಓ, ಹೆಗ್ಗನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಯವರು ಮಾತನಾಡಿ, ವಾರ್ಡ್ 71ರ ವ್ಯಾಪ್ತಿಯಲ್ಲಿ ಪ್ರತಿನಿತ್ಯವೂ RTPCR=25+ & Rapid Antigen=30+ ಪಾಸಿಟಿವ್ ಕೇಸ್‌ಗಳು ದಾಖಲಾಗುತ್ತಿವೆ ಹಾಗೂ ವಾರ್ಡ್ 71 ರ ವ್ಯಾಪ್ತಿಯಲ್ಲಿ ಬಹುತೇಕ ಲಸಿಕಾಕರಣ ಕಾರ್ಯವನ್ನು ಪೂರ್ಣಗೊಳಿಸಲಾಗಿದೆ ಎಂದು ತಿಳಿಸಿದರು.

- **<u>ವಿಷಯ ಸಂಖ್ಯೆ: 3 :-</u> ಸುಂಕದಕಟ್ಟೆ ಹೊಯ್ಸಳ ನಗರ ನಿವಾಸಿಗಳ ಕುಂದು ಕೊರತೆಯ ಬಗ್ಗೆ**

ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ ವಾರ್ಡ್ ಕಮಿಟಿ ಸದಸ್ಯರು ಹಾಗೂ ಸುಂಕದಕಟ್ಟೆ ನಾಗರೀಕರ ಹಿತರಕ್ಷಣಾ ವೇದಿಕೆ (ರಿ). ಅಧ್ಯಕ್ಷರೂ ಆದ ಶ್ರೀ ವೆಂಕಟರಾಜು ರವರು ಮಾತನಾಡಿ, ಸುಂಕದಕಟ್ಟೆ ಹೊಯ್ಸಳನಗರ ನಿವಾಸಿಗಳ ಕುಂದು ಕೊರತೆಯ ಬಗ್ಗೆ ಪತ್ರ ಮುಖೇನ ಸಭೆಯ ಗಮನಕ್ಕೆ ತಂದಿದ್ದು, ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಕ್ತ ಸಲಹೆ ನೀಡಬೇಕೆಂದು ಕೋರಿರುವ ಮನವಿ ಪತ್ರದ ಬಗ್ಗೆ ತೆಗೆದುಕೊಂಡಿರುವ ಕ್ರಮಗಳನ್ನು ನೀಡುವಂತೆ ಕೋರಿದರು.

ಇದಕ್ಕೆ ಬಿ.ಡಬ್ಲ್ಯೂ.ಎಸ್.ಎಸ್.ಬಿಯ ಸಿಬ್ಬಂದಿಯವರು ಮಾತನಾಡಿ ಹಿಂದಿನ ಸಭೆಯಲ್ಲಿ ಪಡೆದ ದೂರಿನ ಪ್ರತಿಯನ್ನು ಮೇಲಾಧಿಕಾರಿಗಳ ಗಮನಕ್ಕೆ ತರಲಾಗಿದೆ. ಅದರಂತೆ ಈಗಾಗಲೇ ಕೆಲವು ರಸ್ತೆಗಳಲ್ಲಿ Restoration ಕಾರ್ಯವನ್ನು ಕೈಗೊಳ್ಳಲಾಗಿದೆ ಹಾಗೂ ಕೆಲವು ಕಡೆಗಳಲ್ಲಿ ವೆಟ್ ಮಿಕ್ಸ್ ಅಳವಡಿಸಿದ್ದು, ಶೀಘ್ರದಲ್ಲಿಯೇ Restoration ಕಾರ್ಯವನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಕ್ರಮ ಕೈಗೊಳ್ಳುವಂತೆ ತಿಳಿಸಲು ಸೂಚಿಸಿದರು.

- **<u>ವಿಷಯ ಸಂಖ್ಯೆ:4</u>**
  **ವಾರ್ಡ್ ವ್ಯಾಪ್ತಿಯಲ್ಲಿ ಹಳೆಯ ವಿದ್ಯುತ್ ಕಂಬಗಳನ್ನು ತೆರವುಗೊಳಿಸುವ ಬಗ್ಗೆ:**

ಶ್ರೀ ವೆಂಕಟರಾಜು, ಸದಸ್ಯರು ಮಾತನಾಡಿ, ಹಿಂದಿನ ಸಭೆಯಲ್ಲಿ ಕೋರಿದ್ದ ಮನವಿಗೆ ಬೆಸ್ಕಾಂ ರವರು ಸ್ಪಂದಿಸಿದ್ದು ವಾರ್ಡ್ 71ರ ವ್ಯಾಪ್ತಿಯ ಹೊಯ್ಸಳನಗರದಲ್ಲಿ ಹೊಸ ವಿದ್ಯುತ್ ಕಂಬಗಳನ್ನು ಹಾಕಿರುತ್ತಾರೆ. ಆದರೆ ಹಳೆಯ ವಿದ್ಯುತ್ ಕಂಬಗಳನ್ನು ತೆರವುಗೊಳಿಸಿಕೊಡುವಂತೆ ಕೋರಿದರು.

ಇದಕ್ಕೆ ನೋಡಲ್ ಅಧಿಕಾರಿಗಳು ಮಾತನಾಡಿ, ಈ ಬಗ್ಗೆ ಬೆಸ್ಕಾಂ ರವರಿಗೆ ಗಮನ ಸೆಳೆದು ಅಗತ್ಯ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು,

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.71ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.71ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ 71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ.71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ